# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಸೈಯದ್ ಅಜ್ಮತುಲ್ಲಾ ಎಜುಕೇಷನಲ್ ಅಂಡ್ ಚಾರಿಟಬಲ್ ಟ್ರಸ್ಟ್ ಇವರು ರಹಮತುಲ್ಲಾ ಇನ್ಸ್‌ಟಿಟ್ಯೂಟ್ ಆಫ್ ಫಾರ್ಮಸ್ಯುಟಿಕ್ ಸೈನ್ಸಸ್, ಕಲಬುರಗಿ ಇಲ್ಲಿ ಹೊಸದಾಗಿ ಬಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವ ಬಗ್ಗೆ.

**ಓದಲಾಗಿದೆ:**
1. ಕುಲಸಚಿವರು, ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಇವರ ಪ್ರಸ್ತಾವನೆ ಸಂಖ್ಯೆ:ಎಸಿಎ/ಎಫ್/ಪಿಹೆಚ್–109/2019–20, ದಿನಾಂಕ: 10.008.2018.
2. ಔಷಧ ನಿಯಂತ್ರಕರು (ಪ್ರ), ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರ ವರದಿ ಸಂಖ್ಯೆ:ಔನಿಇ/110/ಯೋಜನೆ/2018–19, ದಿನಾಂಕ: 25.03.2019.
3. ದಿನಾಂಕ:04.05.2019ರಂದು ನಡೆದ ಉನ್ನತ ಮಟ್ಟದ ಸಮಿತಿ ಸಭೆಯ ನಡವಳಿಗಳು.

*****

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರ.ಸಂ (1)ರ ಪ್ರಸ್ತಾವನೆಯಲ್ಲಿ, ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, ಬೆಂಗಳೂರು ಇವರು ಸೈಯದ್ ಅಜ್ಮತುಲ್ಲಾ ಎಜುಕೇಷನಲ್ ಅಂಡ್ ಚಾರಿಟಬಲ್ ಟ್ರಸ್ಟ್ ಇವರು ರಹಮತುಲ್ಲಾ ಇನ್ಸ್‌ಟಿಟ್ಯೂಟ್ ಆಫ್ ಫಾರ್ಮಸ್ಯುಟಿಕ್ ಸೈನ್ಸಸ್, ಕಲಬುರಗಿ ಇಲ್ಲಿ ಹೊಸದಾಗಿ ಬಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ವಿಶ್ವವಿದ್ಯಾಲಯವು ಅಫಿಲಿಯೇಷನ್ ನೀಡಲು ಅನುಮೋದನೆ ನೀಡಿದ್ದು, ಇದನ್ನು ಪರಿಗಣಿಸುವಂತೆ ಸರ್ಕಾರವನ್ನು ಕೋರಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ (2)ರ ವರದಿಯಲ್ಲಿ, ಔಷಧ ನಿಯಂತ್ರಕರು (ಪ್ರ), ಔಷಧ ನಿಯಂತ್ರಣ ಇಲಾಖೆ, ಬೆಂಗಳೂರು ಇವರು ಸೈಯದ್ ಅಜ್ಮತುಲ್ಲಾ ಎಜುಕೇಷನಲ್ ಅಂಡ್ ಚಾರಿಟಬಲ್ ಟ್ರಸ್ಟ್ ಇವರು ರಹಮತುಲ್ಲಾ ಇನ್ಸ್‌ಟಿಟ್ಯೂಟ್ ಆಫ್ ಫಾರ್ಮಸ್ಯುಟಿಕ್ ಸೈನ್ಸಸ್, ಕಲಬುರಗಿ ಇಲ್ಲಿ ಹೊಸದಾಗಿ ಬಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡುವುದಕ್ಕೆ ಸಂಬಂಧಿಸಿದಂತೆ ಪ್ರಾಂಶುಪಾಲರು, ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ, ಬೆಂಗಳೂರು ಇವರು ಸಲ್ಲಿಸಿರುವ ಪರಿವೀಕ್ಷಣಾ ವರದಿಯನುಸಾರ ಸಂಸ್ಥೆಯು ಅಗತ್ಯವಿರುವ ಮೂಲಭೂತ ಸೌಕರ್ಯಗಳನ್ನು ಹೊಂದಿದ್ದು, ಶೇ. 50ರಷ್ಟು ಸೀಟನ್ನು ಸರ್ಕಾರಕ್ಕೆ ಬಿಟ್ಟುಕೊಡಲು ಸಹಮತಿಯನ್ನು ಬಂಧಪತ್ರದಲ್ಲಿ ನೀಡಿರುವುದರಿಂದ, ಹೊಸದಾಗಿ ಪ್ರಥಮ ಬಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಷರತ್ತುಗಳಿಗೊಳಪಟ್ಟು ಅನುಮತಿ ನೀಡುಬಹುದಾಗಿದೆ ಎಂದು ಅಭಿಪ್ರಾಯ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರ.ಸಂ (3)ರ ಉನ್ನತ ಮಟ್ಟದ ಸಮಿತಿ ಸಭೆಯಲ್ಲಿ ಈ ಸಂಸ್ಥೆಗೆ 60 ವಿದ್ಯಾರ್ಥಿಗಳ ಪ್ರವೇಶಮಿತಿಯಲ್ಲಿ 2019–20ನೇ ಶೈಕ್ಷಣಿಕ ಸಾಲಿನಿಂದ ಬಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಅನುಮತಿ ನೀಡಲು ಶಿಫಾರಸ್ಸು ಮಾಡಲಾಗಿದೆ.

. . . 2

Scanned with CamScanner

ಕುಲಸಚಿವರ ಪ್ರಸ್ತಾವನೆ, ಔಷಧ ನಿಯಂತ್ರಕರ (ಪ್ರ) ವರದಿ ಮತ್ತು ಲಭ್ಯವಿರುವ ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಸೈಯದ್ ಅಜ್ಮತುಲ್ಲಾ ಎಜುಕೇಷನಲ್ ಅಂಡ್ ಚಾರಿಟಬಲ್ ಟ್ರಸ್ಟ್ ಇವರು ರಹಮತುಲ್ಲಾ ಇನ್ಸ್‌ಟಿಟ್ಯೂಟ್ ಆಫ್ ಫಾರ್ಮಸ್ಯುಟಿಕ್ ಸೈನ್ಸಸ್, ಕಲಬುರಗಿ ಇಲ್ಲಿ ಹೊಸದಾಗಿ ಪ್ರಥಮ ಬಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಪಿ.ಸಿ.ಐ ಮತ್ತು ಎ.ಐ.ಸಿ.ಟಿ.ಇ ನವದೆಹಲಿ ಹಾಗೂ ಅಗತ್ಯವಿರುವ ಇತರೆ ಸಕ್ಷಮ ಪ್ರಾಧಿಕಾರಗಳಿಂದ ಅನುಮೋದನೆಯನ್ನು ಪಡೆಯುವ ಷರತ್ತಿಗೊಳಪಟ್ಟು ಅನುಮತಿ ನೀಡಲು ನಿರ್ಧರಿಸಿದೆ. ಆದುದರಿಂದ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ:ಆಕುಕ 226 ಪಿಟಿಡಿ 2018, ಬೆಂಗಳೂರು, ದಿನಾಂಕ:14.08.20120.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸೈಯದ್ ಅಜ್ಮತುಲ್ಲಾ ಎಜುಕೇಷನಲ್ ಅಂಡ್ ಚಾರಿಟಬಲ್ ಟ್ರಸ್ಟ್ ಇವರು ರಹಮತುಲ್ಲಾ ಇನ್ಸ್‌ಟಿಟ್ಯೂಟ್ ಆಫ್ ಫಾರ್ಮಸ್ಯುಟಿಕ್ ಸೈನ್ಸಸ್, ಕಲಬುರಗಿ ಇಲ್ಲಿ 2020-21ನೇ ಶೈಕ್ಷಣಿಕ ಸಾಲಿನಿಂದ 60 (ಅರವತ್ತು) ವಿದ್ಯಾರ್ಥಿಗಳ ಪ್ರವೇಶಮಿತಿಯಲ್ಲಿ ಹೊಸದಾಗಿ ಪ್ರಥಮ ಬಿ.ಫಾರ್ಮಸಿ ಕೋರ್ಸ್ ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮತಿ ನೀಡಲಾಗಿದೆ.

1. ಪ್ರಸ್ತಾಪಿಸಿರುವ ಬಿ.ಫಾರ್ಮಸಿ ಕಾಲೇಜು/ಕೋರ್ಸ್‌ನ್ನು ಪ್ರಾರಂಭಿಸುವ ಮೊದಲು ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ, ನವದೆಹಲಿ ಮತ್ತು ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ ಇವರಿಂದ ಹಾಗೂ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಅನುಮೋದನೆ/ ಅನುಮತಿಯನ್ನು ಪಡೆಯತಕ್ಕದ್ದು.
2. ಕಾಲೇಜನ್ನು ಪ್ರಾರಂಭಿಸುವ ಮುನ್ನ ಅಗತ್ಯವಿರುವ ಎಲ್ಲಾ ಮೂಲ ಸೌಲಭ್ಯಗಳು ಹಾಗೂ ಸಿಬ್ಬಂದಿಯನ್ನು ಹೊಂದಿರತಕ್ಕದ್ದು.
3. ಸರ್ಕಾರದ ಸೀಟುಗಳ ಹಂಚಿಕೆಯಲ್ಲಿ ಪ್ರವೇಶಾವಕಾಶಕ್ಕೆ ಹಾಲಿ ಜಾರಿಯಲ್ಲಿರುವ ನಿಯಮ/ಆದೇಶಗಳಿಗೆ ಸಂಸ್ಥೆಯು ಬದ್ಧವಾಗಿರಬೇಕು ಮತ್ತು ಸರ್ಕಾರಿ ಕೋಟಾ ಸೀಟುಗಳನ್ನು ಬಿಟ್ಟುಕೊಡತಕ್ಕದ್ದು.
4. ಅಖಿಲ ಭಾರತ ತಾಂತ್ರಿಕ ಶಿಕ್ಷಣ ಪರಿಷತ್ತು/ಫಾರ್ಮಸಿ ಕೌನ್ಸಿಲ್ ಆಫ್ ಇಂಡಿಯಾ ನಿಗದಿಪಡಿಸಿರುವ ಪರಿನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.
5. ರಾಜ್ಯ/ಕೇಂದ್ರ ಸರ್ಕಾರವು ಕಾಲಕಾಲಕ್ಕೆ ನೀಡುವ ಸೂಚನೆ ಹಾಗೂ ಆದೇಶಗಳನ್ನು ಪಾಲಿಸತಕ್ಕದ್ದು.
6. ಈ ಕಾಲೇಜಿಗೆ ಕರ್ನಾಟಕ ಸರ್ಕಾರದ ವತಿಯಿಂದ ಯಾವುದೇ ರೀತಿಯ ಅನುದಾನ, ಆರ್ಥಿಕ ಸೌಲಭ್ಯಗಳನ್ನು ನೀಡಲಾಗುವುದಿಲ್ಲ. ಇದು ಶಾಶ್ವತ ಅನುದಾನ ರಹಿತ ಷರತ್ತಿಗೆ ಒಳಪಟ್ಟಿರುತ್ತದೆ.
7. ಸರ್ಕಾರ/ಪ್ರಾಧಿಕಾರದ ಪೂರ್ವಾನುಮತಿಯಿಲ್ಲದೆ ಯಾವುದೇ ಕಾರಣಕ್ಕೂ ಕಾಲೇಜಿನ ಹೆಸರು ಮತ್ತು ವಿಳಾಸವನ್ನು ಬದಲಾಯಿಸುವಂತಿಲ್ಲ.
8. ಸರ್ಕಾರವು ಕಾಲಕಾಲಕ್ಕೆ ನಿಗದಿಪಡಿಸುವ ಕೋರ್ಸ್‌ನ ಶುಲ್ಕಗಳನ್ನು ಮಾತ್ರ ವಿದ್ಯಾರ್ಥಿಗಳಿಂದ ಪಡೆಯತಕ್ಕದ್ದು ಮತ್ತು ಸಕ್ಷಮ ಪ್ರಾಧಿಕಾರದಿಂದ ಮಂಜೂರಾದ ಸೀಟುಗಳಲ್ಲಿ ಕಾಲಕಾಲಕ್ಕೆ ಸರ್ಕಾರವು ನಿಗದಿಪಡಿಸುವ ಅನುಪಾತದಲ್ಲಿ ಸರ್ಕಾರಕ್ಕೆ ಸೀಟುಗಳನ್ನು ಬಿಟ್ಟಕೊಡತಕ್ಕದ್ದು.

Scanned with CamScanner

9. ಸರ್ಕಾರ ವಿಧಿಸಿರುವ ಮೇಲ್ಕಂಡ ಯಾವುದೇ ಒಂದು ಷರತ್ತನ್ನು ಉಲ್ಲಂಘಿಸಿದ್ದಲ್ಲಿ ಸಂಯೋಜನೆ/ಮಂಜೂರಾತಿಯನ್ನು ಹಿಂತೆಗೆದುಕೊಳ್ಳಲಾಗುವುದು.
10. ಔಷಧ ನಿಯಂತ್ರಕರು ಸದರಿ ಸಂಸ್ಥೆಯ ಆರ್ಥಿಕ ಸ್ಥಿತಿಗತಿಯನ್ನು ಖಚಿತಪಡಿಸಿಕೊಳ್ಳತಕ್ಕದ್ದು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ
ಪತ್ರೀಕ ಶಾಖೆ ರವಾನಿಸಿದೆ
ದಿನಾಂಕ: 17/08/2020
ಸಹಿ:

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎನ್. ಪುಷ್ಪ)
ಸರ್ಕಾರದ ಉಪ ಕಾರ್ಯದರ್ಶಿ-3
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

<u>ಇವರಿಗೆ:</u>

1. The Registrar-cum-Secretary, Pharmacy Council of India, P.B. No.7020, Combined Councils Building, Kotla Road, Aiwan-E-Ghalib Marg, New Delhi-110 002.
2. The Member Secretary, All India Council for Technical Education, Nelson Mandela Marg, Vasanth Kunj, New Delhi – 110 067
3. ಔಷಧ ನಿಯಂತ್ರಕರು, ಔಷಧ ನಿಯಂತ್ರಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
4. ಕುಲಸಚಿವರು, ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ, 4ನೇ ಟಿ.ಬ್ಲಾಕ್, ಜಯನಗರ, ಬೆಂಗಳೂರು-41.
5. ಸದಸ್ಯ ಕಾರ್ಯದರ್ಶಿ, ಪರೀಕ್ಷಾ ಪ್ರಾಧಿಕಾರ ಮಂಡಳಿ, ಸರ್ಕಾರಿ ಔಷಧ ವಿಜ್ಞಾನ ಮಹಾವಿದ್ಯಾಲಯ, ಪಿ.ಕಾಳಿಂಗರಾವ್ ರಸ್ತೆ, ಬೆಂಗಳೂರು-560 027.
6. ಪ್ರಾಂಶುಪಾಲರು, ರಹಮತುಲ್ಲಾ ಇನ್ಸ್‌ಟಿಟ್ಯೂಟ್ ಆಫ್ ಫಾರ್ಮಸ್ಯುಟಿಕ್ ಸೈನ್ಸಸ್, ಕಲಬುರಗಿ.
7. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

<u>ಪ್ರತಿಗಳು:-</u>

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರಿಗೆ.
3. ಸರ್ಕಾರದ ಉಪ ಕಾರ್ಯದರ್ಶಿ-3, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರಿಗೆ.

Scanned with CamScanner